# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/415/2020-21. ದಿನಾಂಕ : 08-03-2021

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 06-03-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ, ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆಂಕಟೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 4 | ಸಿ.ಗೋವಿಂದರಾಜಲು | ಕೆಂಪೇ ವಾರ್ಡ್ ಸಂಖ್ಯೆ: 143 | 9900691698 |
| 5 | ಕೆ.ಕಂಪಣ್ಣ | BWSSB | 9844776655 |
| 6 | Subramni.B.C. | Marshal (BBMP) | 9066997278 |
| 7 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 8 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 9 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 10 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

Scanned by CamScanner

ದಿನಾಂಕ:-06-03-2021 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ರವರ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ, ರಾಮಯ್ಯಂಗಾರ್ ರಸ್ತೆ Porwal sadan ಕಟ್ಟಡದ ಮುಂಭಾಗ ಕಸದ ರಾಶಿ ಬಿದ್ದಿರುವುದನ್ನು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಛಾಯಾಚಿತ್ರ ಸಮೇತ ವಾರ್ಡಿನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ವಾಟ್ಸಾಪ್ ಮುಖಾಂತರ ಕಳುಹಿಸಿ ಕೂಡಲೇ ಕ್ರಮ ವಹಿಸಲು ನೋಡಲ್ ಅಧಿಕಾರಿಗಳು ಸೂಚಿಸಿದ್ದ ಮೇರೆಗೆ ಕಸದ ರಾಶಿಯನ್ನು ಕೂಡಲೇ ತೆರವುಗೊಳಿಸಿ ಛಾಯಾಚಿತ್ರ ಕಳುಹಿಸಿದ್ದನ್ನು ಸಭೆಯಲ್ಲಿ ಪ್ರಶಂಸಿಸಲಾಯಿತು.

ನಂತರ ಬಸನವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ ವಾಣಿ ವಿಲಾಸ ರಸ್ತೆಯಿಂದ ಮಾಧವರಾವ್ ಸರ್ಕಲ್‌ವರೆಗೆ ಕನಕಪುರ ರಸ್ತೆಯಲ್ಲಿ ಮಾಡಬೇಕಾದ ವೈಟ್ ಟಾಪಿಂಗ್ ಕಾಮಗಾರಿ ಬಗ್ಗೆ ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದ್ದ ವಿಷಯವನ್ನು ಪುನಃ ಪ್ರಸ್ತಾಪಿಸಿ ಸದರಿ ಕಾಮಗಾರಿಯು ಇನ್ನೂ ಅನುಷ್ಠಾನಗೊಳ್ಳದ ಹಿನ್ನೆಲೆಯಲ್ಲಿ ಈ ಬಗ್ಗೆ ನಮ್ಮ ಅಸೋಸಿಯೇಷನ್ ನಿಂದ ಮಾನ್ಯ ಪ್ರಧಾನ ಮಂತ್ರಿಗಳಿಗೆ ಪತ್ರ ಬರೆಯುತ್ತಿರುವುದಾಗಿ ಸಭೆಗೆ ತಿಳಿಸಿದರು. ಇದಕ್ಕೆ ಪೂರಕವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಈ ಹಿಂದಿನ ಸಭೆಯಲ್ಲಿ ಹಾಜರಿದ್ದ ಬಿಬಿಎಂಪಿ ಕೇಂದ್ರ ಕಾಮಗಾರಿ (ಯೋಜನೆ) ವಿಭಾಗದ ಅಧಿಕಾರಿಗಳು ಈ ಬಗ್ಗೆ ಕೂಡಲೇ ಕ್ರಮ ವಹಿಸಲಾಗುವುದೆಂದು ತಿಳಿಸಿದ್ದನ್ನು ಸಭೆಯಲ್ಲಿ ನೆನಪಿಸಿದರು.

ನಂತರ ಬಸನವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಪುನಃ ಮಾತನಾಡಿ, ಕನಕಪುರ ರಸ್ತೆ ಮತ್ತು ಬಿ.ಪಿ.ವಾಡಿಯ ರಸ್ತೆ ಜಂಕ್ಷನ್‌ನಲ್ಲಿ (ಬಾಂಬೆ ಹೌಸ್ ಮುಂಭಾಗ) 6"ಅಡಿ x 6"ಅಡಿ ಗಾತ್ರದ ಗುಂಡಿಯನ್ನು ತೆಗೆದಿದ್ದು ಇದರಿಂದಾಗಿ ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆಯುಂಟಾಗುತ್ತಿರುವುದಾಗಿ ತಿಳಿಸಿ ಇದನ್ನು ಯಾವ ಕಾರಣಕ್ಕಾಗಿ ಮತ್ತು ಯಾರು ಅಗೆದಿದ್ದಾರೆ ಎಂಬುದು ತಿಳಿಯುತ್ತಿಲ್ಲವೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಚರ್ಚಿಸಲಾಗಿ ಸದರಿ ಪಾದಚಾರಿ ಮಾರ್ಗವು ವಾರ್ಡ್ ಸಂಖ್ಯೆ: 153 ಕ್ಕೆ ಬರುವುದರಿಂದ ಈ ಬಗ್ಗೆ ಪರಿಶೀಲಿಸಿ ಕ್ರಮವಹಿಸಲು ವಾರ್ಡ್ ಸಂಖ್ಯೆ: 153 ರ ಅಭಿಯಂತರರಿಗೆ ತಿಳಿಸಲಾಗುವುದೆಂದು ಕಾರ್ಯದರ್ಶಿಗಳು ಸಭೆಗೆ ತಿಳಿಸಿದರು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ, ಶ್ರದ್ಧಾನಂದ ಭವನ ರಸ್ತೆಯಲ್ಲಿ ನಾಲ್ಕು ಸಂಖ್ಯೆ, ನಾಲ್ಕು ಚಕ್ರದ ವಾಹನಗಳು ಮತ್ತು ಮೂರು ದ್ವಿಚಕ್ರ ವಾಹನಗಳು ಹಲವಾರು ವರ್ಷಗಳಿಂದ ನಿಂತಿರುವುದರಿಂದ ಸಾರ್ವಜನಿಕರ ವಾಹನ ಓಡಾಟಕ್ಕೆ ತೊಂದರೆಯಾಗುತ್ತಿರುವುದಾಗಿ ತಿಳಿಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಕೋರಿದರು. ಈ ಬಗ್ಗೆ ಚರ್ಚಿಸಲಾಗಿ ವಿ.ವಿ.ಪುರಂ ಟ್ರಾಫಿಕ್ ಪೋಲಿಸ್ ರವರಿಗೆ ಸೂಕ್ತ ಕ್ರಮ ವಹಿಸಲು ಕೋರುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

Scanned by CamScanner

ನಂತರ ಬಸನವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ವಾಣಿ ವಿಲಾಸ ರಸ್ತೆಯಿಂದ ಬಾಂಬೆ ಹೌಸ್ ವರೆಗಿನ ಕನಕಪುರ ರಸ್ತೆಯಲ್ಲಿ ಬೀದಿ ದೀಪಗಳು ಸರಿಯಾಗಿ ಇಲ್ಲದೆ ಬಹಳ ಕಡಿಮೆ ಬೆಳಕು ಇರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದ್ದ ವಿಷಯವನ್ನು ಪುನಃ ಪ್ರಸ್ತಾಪಿಸಿ ಮಾತನಾಡಿದರು. ಈ ಬಗ್ಗೆ ಕೂಡಲೇ ಪರಿಶೀಲಿಸಿ ಕ್ರಮವಹಿಸಲು ಬಿಬಿಎಂಪಿ ಬೀದಿ ದೀಪ ನಿರ್ವಹಣೆ ವಿಭಾಗಕ್ಕೆ ತಿಳಿಸಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಬಸನವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಪುನಃ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿರುವ ಖಾಸಗಿ ಕಟ್ಟಡಗಳಲ್ಲಿ ಮಳೆ ನೀರು ಕೊಯ್ಲು (ಇಂಗು ಗುಂಡಿ) ವ್ಯವಸ್ಥೆಯನ್ನು ಮಾಡಿಕೊಳ್ಳದೇ ಇರುವುದರಿಂದ ಮಳೆಯು ಬಂದಾಗ ಖಾಸಗಿ ಕಟ್ಟಡಗಳ ಮೇಲಿಂದ ಬರುವ ನೀರು ರಸ್ತೆಗಳಲ್ಲಿ ರಭಸವಾಗಿ ಹರಿದು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು. ಅಲ್ಲದೆ ಕೆಲವು ಖಾಸಗಿ ಕಟ್ಟಡಗಳ ಮಾಲೀಕರು ಮಳೆ ನೀರನ್ನು ಒಳಚರಂಡಿಗೆ ಬಿಡುವುದರಿಂದ ಮಳೆ ಬಂದಾಗ ಒಳಚರಂಡಿಗಳು ಉಕ್ಕಿ ಹರಿದು ತೊಂದರೆ ಉಂಟಾಗುತ್ತಿರುವುದಾಗಿ ತಿಳಿಸಿ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ BWSSB ಅಧಿಕಾರಿಗಳು ಮಾತನಾಡಿ ಒಳಚರಂಡಿಗಳಿಗೆ ಮಳೆ ನೀರು ಬಿಡುವವರನ್ನು ಮತ್ತು ಮಳೆ ನೀರು ಕೊಯ್ಲು ವ್ಯವಸ್ಥೆ ಮಾಡಿಕೊಳ್ಳದ ಖಾಸಗಿ ಕಟ್ಟಡಗಳ ಮಾಲೀಕರಿಗೆ ನೋಟೀಸ್ ಜಾರಿಗೊಳಿಸಿ ದಂಡ ವಿಧಿಸಲಾಗುವುದೆಂದು ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| 8/3/2021 | 8/3/2021 |
| ಕಾರ್ಯದರ್ಶಿಗಳು ಹಾಗೂ | ನೋಡಲ್ ಅಧಿಕಾರಿಗಳು |
| ಸಹಾಯಕ ಅಭಿಯಂತರರು | ವಾರ್ಡ್ ಸಂಖ್ಯೆ: 143 ಹಾಗೂ |
| ವಾರ್ಡ್ –143 ವಿ. ವಿ.ಪುರಂ | ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |

Scanned by CamScanner